ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಮನೆ ಹಂಚಿಕೆ ಮಾಡಲು ನಿಗದಿಪಡಿಸಿರುವ ಮಾನದಂಡಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

51 (336) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಹಂಚಿಕೆ ಮಾಡುವ ಮನೆಗಳನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳೇನು ; ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಹಂಚಿಕೆಯಾದ ಮನೆಗಳೆಷ್ಟು ; ಈ ಮನೆಗಳನ್ನು ಪಡೆದಿರುವ ಫಲಾನುಭವಿಗಳೆಷ್ಟು ; (ಫಲಾನುಭವಿ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿ ವಿವರ ನೀಡುವುದು)

(ಆ) ಹಂಚಿಕೆಯಾಗಿರುವ ಮನೆಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; ಮಂಜೂರಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು ; (ಫಲಾನುಭವಿ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿ ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ನಿರ್ವಸತಿಕರ ಸಂಖ್ಯೆ ಎಷ್ಟು ; ಈ ನಿರ್ವಸತಿಕರಿಗೆ ಯಾವ ಕಾಲಮಿತಿಯೊಳಗೆ ವಸತಿ ಕಲ್ಪಿಸಲಾಗುವುದು ? (ನಿರ್ವಸತಿಕರ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿವಾರು ಮಾಹಿತಿಯೊಂದಿಗೆ ವಿವರ ನೀಡುವುದು)